**All India Radio: Bangalore**
**National Bulletin In Kannada**
**10.04.2026  1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**10.04.2026  1.10 p.m.**
**<><><><>**

ಮುಖ್ಯಾಂಶಗಳು

1. ಎರಡನೇ ಹಂತದ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆ; ಇಂದು ನಾಮಪತ್ರ ಪರಿಶೀಲನೆ
2. ರಾಜ್ಯಸಭೆಯ ಮಾಜಿ ಉಪಸಭಾಪತಿ ಹರಿವಂಶ್ ಅವರನ್ನು ರಾಜ್ಯಸಭಾ ಸದಸ್ಯರಾಗಿ ರಾಷ್ಟ್ರಪತಿಗಳಿಂದ ನಾಮ ನಿರ್ದೇಶನ
3. ಪ್ಯಾಕ್ಸ್ ಸಿಲಿಕಾ ಅಡಿ ಆರ್ಥಿಕ ಮತ್ತು ತಾಂತ್ರಿಕ ಸಹಕಾರ ವಿಸ್ತರಣೆಗೆ ಭಾರತ - ಅಮೆರಿಕ ಸಹಮತ
4. ಜಾತಿ ಜನಗಣತಿ ತಡೆಹಿಡಿಯುವಂತೆ ಕೇಂದ್ರ ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿದ್ದ ಅರ್ಜಿ ವಜಾಗೊಳಿಸಿದ ಸುಪ್ರೀಂಕೋರ್ಟ್
5. ರಣ್ ಸಂವಾದ್ ವಿಚಾರ ಸಂಕಿರಣ; ಎರಡನೇ ದಿನವಾದ ಇಂದು ಬಹು ಆಯಾಮ ಕಾರ್ಯಾಚರಣೆಗಳ ಕುರಿತು ಚರ್ಚೆ

<><><><>

ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಯ ಎರಡನೇ ಹಂತದ ನಾಮಪತ್ರಗಳ ಪರಿಶೀಲನೆಯು ಇಂದು ನಡೆಯುತ್ತಿದೆ. ಈ ಹಂತದ ೧೪೨ ಸ್ಥಾನಗಳಿಗೆ ನಾಮಪತ್ರ ಸಲ್ಲಿಸಲು ನಿನ್ನೆ ಕೊನೆಯ ದಿನವಾಗಿತ್ತು. ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆಯಲು ಏಪ್ರಿಲ್ ೧೩ ರವರೆಗೆ ಕಾಲಾವಕಾಶ ನೀಡಲಾಗಿದೆ. ಎರಡನೇ ಹಂತದ ಚುನಾವಣಾ ಕಣದಲ್ಲಿ ಭಾರತೀಯ ಜನತಾ ಪಕ್ಷದ ನಾಯಕ ಹಾಗೂ ವಿರೋಧ ಪಕ್ಷದ ನಾಯಕ ಸುವೇಂದು ಅಧಿಕಾರಿ ಮತ್ತು ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಅವರಂತಹ ಪ್ರಮುಖ ನಾಯಕರು ಸ್ಪರ್ಧೆಯಲ್ಲಿದ್ದಾರೆ. ಈ ಹಂತದ ಮತದಾನವು ಏಪ್ರಿಲ್ ೨೯ ರಂದು ನಡೆಯಲಿದೆ. ಮತ್ತೊಂದೆಡೆ, ಮೊದಲ ಹಂತದ ಚುನಾವಣೆಗೆ ಉಮೇದುವಾರಿಕೆ ಹಿಂಪಡೆಯುವ ಅವಧಿಯು ನಿನ್ನೆ ಮುಕ್ತಾಯಗೊಂಡಿದೆ. ಈ ಹಂತದ ಒಟ್ಟು ೧೫೨ ಸ್ಥಾನಗಳಿಗಾಗಿ ೧ ಸಾವಿರದ ೫೮೬ ಅಭ್ಯರ್ಥಿಗಳು ೨ ಸಾವಿರದ ೩೦೪ ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಈ ಕ್ಷೇತ್ರಗಳಿಗೆ ಏಪ್ರಿಲ್ ೨೩ ರಂದು ಮತದಾನ ನಡೆಯಲಿದೆ ಎಂದು ಚುನಾವಣಾ ಅಧಿಕಾರಿಗಳು ತಿಳಿಸಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಜ್ಯಸಭೆಯ ಮಾಜಿ ಉಪಸಭಾಪತಿ ಹರಿವಂಶ್ ಅವರನ್ನು ಮೇಲ್ಮನೆಯ ಸದಸ್ಯರನ್ನಾಗಿ ನಾಮನಿರ್ದೇಶನ ಮಾಡಿದ್ದಾರೆ. ಹರಿವಂಶ್ ಅವರ ರಾಜ್ಯಸಭಾ ಸದಸ್ಯತ್ವದ ಅವಧಿಯು ನಿನ್ನೆಯಷ್ಟೇ ಮುಕ್ತಾಯಗೊಂಡಿತ್ತು. ಭಾರತದ ಮಾಜಿ ಮುಖ್ಯ ನ್ಯಾಯಮೂರ್ತಿ ರಂಜನ್ ಗೊಗೊಯ್ ಅವರ ನಿವೃತ್ತಿಯಿಂದ ತೆರವಾಗಿದ್ದ ಸ್ಥಾನಕ್ಕೆ ಇವರನ್ನು ನಾಮನಿರ್ದೇಶನ ಮಾಡಲಾಗಿದೆ. ಈ ಕುರಿತಂತೆ ಕೇಂದ್ರ ಗೃಹ ವ್ಯವಹಾರಗಳ ಸಚಿವಾಲಯವು ಇಂದು ಅಧಿಕೃತ ಅಧಿಸೂಚನೆಯನ್ನು ಹೊರಡಿಸಿದೆ.

<><><><>

ಭಾರತದ ಯುವಜನರು ಒಮ್ಮೆ ಏನನ್ನಾದರೂ ಸಾಧಿಸಲು ಸಂಕಲ್ಪ ಮಾಡಿದರೆ ಅದನ್ನು ಕಾರ್ಯರೂಪಕ್ಕೆ ತರುತ್ತಾರೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಸಂಸ್ಕೃತ ಸುಭಾಷಿತ ಒಂದನ್ನು ಹಂಚಿಕೊಂಡಿರುವ ಅವರು, ಯುವಜನತೆಯ ಅದಮ್ಯ ಉತ್ಸಾಹ ಮತ್ತು ಶಕ್ತಿ ದೇಶವನ್ನು ಅಭಿವೃದ್ಧಿಯ ಪಥದಲ್ಲಿ ವೇಗವಾಗಿ ಮುನ್ನಡೆಸುತ್ತದೆ ಎಂದು ತಿಳಿಸಿದ್ದಾರೆ.

<><><>

ಡಿಜಿಟಲ್ ವಂಚನೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ಆರ್‌ಬಿಐ, ಮಹತ್ವದ ಹೆಜ್ಜೆ ಇರಿಸಿದ್ದು, ಹೆಚ್ಚುವರಿ ಮುನ್ನೆಚ್ಚರಿಕಾ ಕ್ರಮಗಳನ್ನು ಸೂಚಿಸುವ ಚರ್ಚಾ ಪತ್ರವೊಂದನ್ನು ಬಿಡುಗಡೆ ಮಾಡಿದೆ. ಸಾರ್ವಜನಿಕರು ಹಾಗೂ ಸಂಬಂಧಪಟ್ಟ ಪಾಲುದಾರರಿಂದ ಸಲಹೆ ಮತ್ತು ಅಭಿಪ್ರಾಯಗಳನ್ನು ಆರ್‌ಬಿಐ ಆಹ್ವಾನಿಸಿದ್ದು, ಆಸಕ್ತರು ಆರ್‌ಬಿಐ ಜಾಲತಾಣದಲ್ಲಿರುವ ಕನೆಕ್ಟ್ ಟು ರೆಗ್ಯುಲೇಟ್ ಲಿಂಕ್ ಮೂಲಕ ಮೇ ೮ರ ವರೆಗೆ ಅಭಿಪ್ರಾಯ ಸಲ್ಲಿಸಬಹುದಾಗಿದೆ.

<><><>

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರು ತಮ್ಮ ಅಮೆರಿಕ ಭೇಟಿಯ ವೇಳೆ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ ಅವರೊಂದಿಗೆ ಶ್ವೇತಭವನದಲ್ಲಿ ಮಹತ್ವದ ಸಭೆ ನಡೆಸಿದರು. ಪ್ರಮುಖ ಕ್ಷೇತ್ರಗಳಲ್ಲಿನ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸುವ ಕುರಿತು ಈ ಸಭೆಯಲ್ಲಿ ಚರ್ಚಿಸಲಾಯಿತು. ಉಭಯ ನಾಯಕರು ಭಾರತ ಮತ್ತು ಅಮೆರಿಕ ನಡುವಿನ ಪಾಲುದಾರಿಕೆಯನ್ನು ಪರಾಮರ್ಶಿಸಿದ್ದು, ವಿಶೇಷವಾಗಿ ವ್ಯಾಪಾರ, ನಿರ್ಣಾಯಕ ಖನಿಜಗಳು, ರಕ್ಷಣಾ ಸಹಕಾರ ಮತ್ತು 'ಕ್ವಾಡ್' ಚೌಕಟ್ಟಿನ ಕುರಿತು ಹೆಚ್ಚಿನ ಒತ್ತು ನೀಡಿದರು. ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಭಾರತಕ್ಕೆ ಅಮೆರಿಕದ ರಾಯಭಾರಿ ಸೆರ್ಗಿಯೋ ಗಾರ್ ಅವರು ಸಾಮಾಜಿಕ ಮಾಧ್ಯಮದಲ್ಲಿ ಪ್ರತಿಕ್ರಿಯಿಸಿದ್ದು, ಈ ಮಾತುಕತೆಗಳು ರಚನಾತ್ಮಕವಾಗಿದ್ದವು ಮತ್ತು ಭವಿಷ್ಯದ ಹಿತದೃಷ್ಟಿಯಿಂದ ಕೂಡಿದ್ದವು. ಅಲ್ಲದೆ, ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ ಅವರು ಮುಂದಿನ ತಿಂಗಳು ಭಾರತಕ್ಕೆ ಭೇಟಿ ನೀಡುವ ನಿರೀಕ್ಷೆಯಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><><>

ಭಾರತ ಮತ್ತು ಅಮೆರಿಕ ಪ್ಯಾಕ್ಸ್ ಸಿಲಿಕಾ ಅಡಿಯಲ್ಲಿ ಸಹಕಾರವನ್ನು ಮತ್ತಷ್ಟು ವಿಸ್ತರಿಸಲು ಸಮ್ಮತಿಸಿದೆ. ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ ಮತ್ತು ಅಮೆರಿಕದ ಆರ್ಥಿಕ ವ್ಯವಹಾರಗಳ ಉಪ ಕಾರ್ಯದರ್ಶಿ ಜೇಕಬ್ ಎಸ್. ಹೆಲ್ಬರ್ಗ್ ನಡುವೆ ನಡೆದ ಮಾತುಕತೆಯಲ್ಲಿ ಕೃತಕ ಬುದ್ಧಿಮತ್ತೆ ಮತ್ತು ನಿರ್ಣಾಯಕ ಖನಿಜಗಳ ಕ್ಷೇತ್ರ ಸೇರಿದಂತೆ ಆರ್ಥಿಕ ಮತ್ತು ತಾಂತ್ರಿಕ ಪಾಲುದಾರಿಕೆಯನ್ನು ಬಲಪಡಿಸುವ ಕುರಿತು ಚರ್ಚೆ ನಡೆಯಲಿದೆ. ಕಳೆದ ಫೆಬ್ರವರಿಯಲ್ಲಿ ಎಐ ಇಂಪ್ಯಾಕ್ಟ್ ಶೃಂಗಸಭೆಯ ಸಂದರ್ಭದಲ್ಲಿ ಭಾರತ ಅಧಿಕೃತವಾಗಿ ಪ್ಯಾಕ್ಸ್ ಸಿಲಿಕಾ ಒಕ್ಕೂಟಕ್ಕೆ ಸೇರಿಕೊಂಡಿತ್ತು.

<><><>

ದೇಶದ ಜಾತಿಗಣತಿಯನ್ನು ತಡೆಹಿಡಿಯುವಂತೆ ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಕೋರಿ ಸಲ್ಲಿಕೆಯಾಗಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ಇಂದು ವಜಾಗೊಳಿಸಿದೆ. ಮುಖ್ಯ ನ್ಯಾಯಮೂರ್ತಿ

ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೋಯ್ ಮಲ್ಯಾ ಬಾಗ್ಚಿ ಮತ್ತು ವಿಪುಲ್ ಎಂ. ಪಾಂಚೋಲಿ ಅವರನ್ನೊಳಗೊಂಡ ಪೀಠ ಈ ಅರ್ಜಿಯನ್ನು ತಿರಸ್ಕರಿಸಿದೆ.  ಇದೇ ಅರ್ಜಿಯಲ್ಲಿ ಒಂದೇ ಮಗುವನ್ನು ಹೊಂದಿರುವ ಕುಟುಂಬಗಳಿಗೆ ಆರ್ಥಿಕ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ನೀತಿಗಳನ್ನು ರೂಪಿಸಲು ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಕೋರಲಾಗಿತ್ತು. ಈ ಹಿಂದೆ ಫೆಬ್ರವರಿ ೨ ರಂದು ನಡೆದ ವಿಚಾರಣೆಯ ಸಂದರ್ಭದಲ್ಲಿಯೂ ಸಹ ೨೦೨೭ರ ಸಾರ್ವತ್ರಿಕ ಜನಗಣತಿಯಲ್ಲಿ ನಾಗರಿಕರ ಜಾತಿ ದತ್ತಾಂಶವನ್ನು ದಾಖಲಿಸುವ, ವರ್ಗೀಕರಿಸುವ ಮತ್ತು ಪರಿಶೀಲಿಸುವ ಪ್ರಕ್ರಿಯೆಯನ್ನು ಪ್ರಶ್ನಿಸಿ, ಸಲ್ಲಿಸಲಾಗಿದ್ದ ಪ್ರತ್ಯೇಕ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ವಿಚಾರಣೆಗೆ ಎತ್ತಿಕೊಳ್ಳಲು ಸರ್ವೋಚ್ಚ ನ್ಯಾಯಾಲಯ ನಿರಾಕರಿಸಿತ್ತು.

<><><><>

೨೦೨೭ ರ ಜನಗಣತಿಯ ಮೊದಲ ಹಂತದಲ್ಲಿ ಇದುವರೆಗೆ ೫ ಲಕ್ಷ ೭೨ ಸಾವಿರಕ್ಕೂ ಹೆಚ್ಚು ಕುಟುಂಬಗಳು ಸ್ವಯಂ ಎಣಿಕೆ ಸೌಲಭ್ಯವನ್ನು ಪಡೆದುಕೊಂಡಿವೆ. ಇದು ೨೦೨೭ರ ಜನಗಣತಿಗಾಗಿ ಡಿಜಿಟಲ್ ಉಪಕ್ರಮದಲ್ಲಿ ಹೆಚ್ಚುತ್ತಿರುವ ಸಾರ್ವಜನಿಕ ಭಾಗವಹಿಸುವಿಕೆಯನ್ನು ಪ್ರತಿಬಿಂಬಿಸುತ್ತದೆ ಎಂದು ಭಾರತದ ರಿಜಿಸ್ಟ್ರಾರ್ ಜನರಲ್ ಹೇಳಿದ್ದಾರೆ..  ಮೊದಲ ಹಂತದ ಜನಗಣತಿಯು ಏಪ್ರಿಲ್ ೧ ರಂದು ಪ್ರಾರಂಭವಾಯಿತು ಮತ್ತು ಸ್ವಯಂ ಎಣಿಕೆ ಸೌಲಭ್ಯವು ಈ ತಿಂಗಳ ೧೫ ರವರೆಗೆ ಮುಂದುವರಿಯುತ್ತದೆ. ಪ್ರಸ್ತುತ ಹನ್ನೊಂದು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಸ್ವಯಂ ಎಣಿಕೆ ಸೌಲಭ್ಯ ನಡೆಯುತ್ತಿದೆ. ಇದರಲ್ಲಿ ಗೋವಾ, ಕರ್ನಾಟಕ, ಮಿಜೋರಾಂ, ಒಡಿಶಾ, ಸಿಕ್ಕಿಂ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಲಕ್ಷದ್ವೀಪ ಮತ್ತು ರಾಷ್ಟ್ರೀಯ ರಾಜಧಾನಿಯ ದೆಹಲಿ ಕಂಟೋನ್ಮೆಂಟ್ ಮಂಡಳಿ ಸೇರಿವೆ. ಮನೆ ಪಟ್ಟಿ ಮತ್ತು ವಸತಿ ಗಣತಿ ಇದೇ ೧೬ ರಿಂದ ಪ್ರಾರಂಭವಾಗಲಿದ್ದು, ಮೇ ೧೫ ರವರೆಗೆ ನಡೆಯಲಿದೆ. ಮನೆ ಪಟ್ಟಿ ಕಾರ್ಯಾಚರಣೆಗಳು ಎಲ್ಲಾ ಕಟ್ಟಡಗಳು ಮತ್ತು ರಚನೆಗಳನ್ನು ಪಟ್ಟಿ ಮಾಡುವುದು ಮತ್ತು ವಸತಿ ಪರಿಸ್ಥಿತಿಗಳು, ಸೌಕರ್ಯಗಳು ಮತ್ತು ಸ್ವತ್ತುಗಳ ಮಾಹಿತಿಯನ್ನು ಸಂಗ್ರಹಿಸುವುದನ್ನು ಒಳಗೊಂಡಿರುತ್ತದೆ. ಎರಡನೇ ಹಂತದ ಜನಗಣತಿಯನ್ನು ಮುಂದಿನ ವರ್ಷದ ಫೆಬ್ರವರಿಯಲ್ಲಿ ನಡೆಸಲಾಗುವುದು. ಇದು ವಯಸ್ಸು, ಲಿಂಗ, ಉದ್ಯೋಗ, ಸಾಕ್ಷರತೆ ಮತ್ತು ಜಾತಿ ವಿವರಗಳನ್ನು ಒಳಗೊಂಡಂತೆ ವೈಯಕ್ತಿಕ ಮಟ್ಟದ ದತ್ತಾಂಶವನ್ನು ಸಂಗ್ರಹಿಸುವುದರ ಮೇಲೆ ಕೇಂದ್ರೀಕರಿಸುತ್ತದೆ.

<><><><>

ಬೆಂಗಳೂರಿನಲ್ಲಿ ನಡೆಯುತ್ತಿರುವ ಎರಡು ದಿನಗಳ ರಾಷ್ಟ್ರಮಟ್ಟದ ಮೂರು ಸೇನಾ ಪಡೆಗಳ ಕಾರ್ಯತಂತ್ರದ ವಿಚಾರಸಂಕಿರಣ ರಣ್ ಸಂವಾದ್-೨೦೨೬ರ ಎರಡನೇ ದಿನವಾದ ಇಂದು ಮಲ್ಟಿ ಡೊಮೇನ್ ಆಪರೇಷನ್ಸ್ - ಎಂಡಿಒ ಅಂದರೆ ವಿವಿಧ ಆಯಾಮಗಳ ಕಾರ್ಯಾಚರಣೆಗಳ ಕುರಿತು ಚರ್ಚೆಗಳು ಮುಂದುವರಿದಿವೆ. ಆಧುನಿಕ ಯುದ್ಧ ತಂತ್ರದ ಸ್ವರೂಪ ವೇಗವಾಗಿ ಬದಲಾಗುತ್ತಿರುವ ಹಿನ್ನೆಲೆಯಲ್ಲಿ ವಿವಿಧ ಕ್ಷೇತ್ರಗಳ ತಜ್ಞರು ಮತ್ತು ರಕ್ಷಣಾ ಅಧಿಕಾರಿಗಳು ಒಗ್ಗೂಡಿ ಭವಿಷ್ಯದ ಭದ್ರತಾ ಸವಾಲುಗಳನ್ನು ಎದುರಿಸಲು ಸಮಗ್ರ ಕಾರ್ಯತಂತ್ರ ರೂಪಿಸುವ ಬಗ್ಗೆ ವಿಚಾರ ವಿನಿಮಯ ಮಾಡುತ್ತಿದ್ದಾರೆ. ಎಂಡಿಒ ಕುರಿತ ವಿಚಾರಗೋಷ್ಠಿಯ ಹಿನ್ನೆಲೆಯಲ್ಲಿ ಮಾತನಾಡಿರುವ ನೈಋತ್ಯ ಏರ್ ಕಮಾಂಡ್‌ನ ಏರ್ ಆಫೀಸರ್ ಕಮಾಂಡಿಂಗ್ ಇನ್ ಚೀಫ್ ತಜಿಂದರ್ ಸಿಂಗ್, ಸಮಕಾಲೀನ ಯುದ್ಧ ತಂತ್ರದ ಸ್ವರೂಪ ಇಂದು ಕೇವಲ ನೆಲ, ಜಲ ಮತ್ತು ವಾಯುಪ್ರದೇಶಕ್ಕೆ ಸೀಮಿತವಾಗದೆ, ಬಾಹ್ಯಾಕಾಶ ಮತ್ತು

ಸೈಬರ್‌ನಂತಹ ಕ್ಷೇತ್ರಗಳೊಂದಿಗೆ ಮಾನವನ ವೈಚಾರಿಕ ಆಯಾಮ ವಿಸ್ತರಿಸಿದ ಈ ಹೊಸ ಸವಾಲುಗಳನ್ನು ಎದುರಿಸಲು ಮಲ್ಟಿ ಡೊಮೈನ್ ಆಪರೇಷನ್ ಎಂಬ ಪರಿಕಲ್ಪನೆ ಅನಿವಾರ್ಯ ಎಂದು ತಿಳಿಸಿದ್ದಾರೆ.

***ಧ್ವನಿ**** ತಜಿಂದರ್ ಸಿಂಗ್

<><><><>

ಗುವಾಹತಿಯಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ರಾಜಸ್ತಾನ್ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>